ಆ) ಇದ್ದಲ್ಲಿ, ಈ ಯೋಜನೆಯನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು; ಸರ್ಕಾರದ ವಿವಿಧ ಇಲಾಖೆಯಿಂದ ಕ್ರೋಢೀಕರಣಗೊಂಡ ಅನುದಾನವನ್ನು ವಿಧಾನಸಭಾ ಮತಕ್ಷೇತ್ರವಾರು ಹಂಚಿಕೆ ಮಾಡುವುದೇ?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು)

ಅ) ಇಲ್ಲ.

ಆ) ಅನ್ವಯಿಸುವುದಿಲ್ಲ.

ವಿದ್ಯಾರ್ಥಿ ನಿಲಯ ಮಂಜೂರಾತಿ

1614(428); ಶ್ರೀ ಕೋಳಿವಾಡ ಕೆ.ಬಿ. (ರಾಣೇಬೆನ್ನೂರು)

ಅ) ರಾಣಿಬೆನ್ನೂರು ಕ್ಷೇತ್ರದ ವ್ಯಾಪ್ತಿಗೆ ಹೊಸದಾಗಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕ, ಬಾಲಕಿಯರ ಮತ್ತು ಸಾಮಾನ್ಯ ಬಾಲಕರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು; ಈ ಬಗ್ಗೆ ಕೈಗೊಂಡ ಕ್ರಮಗಳೇನು (ಸಂಪೂರ್ಣ ವಿವರ ನೀಡುವುದು)?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೌದು.

ಆ) ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಾವೇರಿ ಜಿಲ್ಲೆ ರಾಣಿಬೆನ್ನೂರು ನಗರದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.